ಉ) ಅಕ್ಟೋಬರ್ 2004ರಿಂದ ಪ್ರಾರಂಭಿಸಲಾಗುವುದು.

643(201) : ಶ್ರೀಮತಿ ಸುನೀತ ವೀರಪ್ಪಗೌಡ ಜೆ. (ಬನ್ನೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೈಸೂರು ಜಿಲ್ಲೆಯ ಟಿ. ನರಸೀಪುರ ತಾಲ್ಲೂಕಿನಾದ್ಯಂತ ಟ್ರಾನ್ಸ್‌ಫಾರ್ಮರ್‌ಗಳು (ಟಿ.ಸಿ.)ಗಳು ಪದೇ ಪದೇ ಕೆಟ್ಟು ಹೋಗುತ್ತಿರುವುದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಟ್ರಾನ್ಸ್‌ಫಾರ್ಮರ್‌ಗಳು (ಟಿ.ಸಿ.)ಗಳು ಹೀಗೆ ಪದೇ ಪದೇ ಕೆಟ್ಟು ಹೋಗಲು ಕಾರಣವೇನು;

ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು. ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಕಾರಣಗಳು:

1. ಪ್ರಕೃತಿ ವಿಕೋಪ–ಸಿಡಿಲು, ಮಳೆ, ಗಾಳಿ ಇತ್ಯಾದಿಗಳಿಂದ ಹಾನಿಯಾಗುವುದು.

2. ಅನಧಿಕೃತ ಪಂಪ್‌ಸೆಟ್ಟುಗಳು ಅಧಿಕವಾಗಿರುವುದು.

ಇ) 2004–05ನೇ ಸಾಲಿನಲ್ಲಿ ದಿನಾಂಕ 24–7–2004ರವರೆಗೆ 73 ಟ್ರಾನ್‌ಫಾರ್ಮರ್‌ಗಳು ವಿಫಲವಾಗಿದ್ದು. ಅದರಲ್ಲಿ 67 ಟ್ರಾನ್ಸ್‌ಫಾರ್ಮರ್‌ಗಳನ್ನು ರಿಪೇರಿ ಮಾಡಿಸಿ ಅಳವಡಿಸಲಾಗಿರುತ್ತದೆ. ಉಳಿದ 6 ಟ್ರಾನ್ಸ್‌ಫಾರ್ಮರ್‌ಗಳನ್ನು ರಿಪೇರಿ ಮಾಡಿ ಅಳವಡಿಸಲು ಕ್ರಮ ತೆಗೆದುಕೊಳ್ಳಲಾಗಿರುತ್ತದೆ.

ಟಿ. ನರಸೀಪುರ ತಾಲ್ಲೂಕಿನಲ್ಲಿ ಎ.ಪಿ.ಡಿ.ಆರ್.ಪಿ. ಯೋಜನೆಯಡಿ ಕಳೆದ ಎರಡು ವರ್ಷಗಳಲ್ಲಿ ಅಂದರೆ 2002–03 ಮತ್ತು 2003–04ನೇ ಸಾಲಿನಲ್ಲಿ ಅಧಿಕವಾಗಿ 285 ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲಾಗಿದೆ. ಹಾಗೂ ಪ್ರಸ್ತುತ 2004–05ನೇ ಸಾಲಿನಲ್ಲಿ ಹೆಚ್ಚುವರಿಯಾಗಿ 21 ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಾಪಿಸಲಾಗುವುದು.

644(203) : ಶ್ರೀಮತಿ ಸುನಿತ ವೀರಪ್ಪಗೌಡ ಜೆ. (ಬನ್ನೂರು) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಿಂದ ಬನ್ನೂರು ಮಾರ್ಗವಾಗಿ ಟಿ. ನರಸೀಪುರ ಪಟ್ಟಣಕ್ಕೆ ಬೆಳಗಿನ ವೇಳೆಯಲ್ಲಿ ಮತ್ತು ಟಿ. ನರಸೀಪುರ ಟೌನ್‌ನಿಂದ ಬನ್ನೂರು ಮಾರ್ಗವಾಗಿ ಬೆಂಗಳೂರಿಗೆ ಮಧ್ಯಾಹ್ನ ನಂತರದ ವೇಳೆಯಲ್ಲಿ ಬಸ್ಸಿನ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ವೇಳೆಯಲ್ಲಿ ಬಸ್ಸಿನ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದೇ?